**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/429/ಪ.ಸೇ.ಅ/2016-17/ನೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:07.07.2017

## ಸುತ್ತೋಲೆ

ವಿಷಯ: ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ) ನಿಯಮಗಳನ್ವಯ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ ಉತ್ತೀರ್ಣಗೊಳಸುವ ಸಂಬಂಧ.

ಉಲ್ಲೇಖ: ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ/43/ಸೇವನೆ/2008, ದಿನಾಂಕ:07.03.2012

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ/43/ ಸೇವನೆ/2008, ದಿನಾಂಕ:07.03.2012ಯಲ್ಲಿ ನಿಯಮ 2ರಲ್ಲಿ ಈ ಕೆಳಕಂಡಂತಿದೆ.

"ನೇರ ನೇಮಕಾತಿ ಆಯ್ಕೆ ಪ್ರಕ್ರಿಯೆ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ಅಥವಾ ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅವಧಿಯಮ 1978 (1990ರ ಕರ್ನಾಟಕ ಅಧಿನಿಯಮ 14) ರಡಿಯಲ್ಲಿ ಯಾವುದೇ ಸೇವೆ ಅಥವಾ ಹುದ್ದೆಗೆ ಸಂಬಂಧಿಸಿದಂತೆ ವಿಶೇಷವಾಗಿ ರಚಿಸಿರುವ ಅಥವಾ ರಚಿಸಲಾಗಿದೆ ಎಂದು ಭಾವಿಸಲಾದ, ನೇಮಕಾತಿ ನಿಯಮಗಳಲ್ಲಿ ಏನೇ ಒಳಗೊಂಡಿದ್ದರೂ ಯಾವುದೇ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಯು, ನಿಯಮ 1ರ ಉಪನಿಯಮ(3)ರಲ್ಲಿ ನಿರ್ದಿಷ್ಟಪಡಿಸಿರುವ ಹುದ್ದೆಗಳನ್ನು ಹೊರತುಪಡಿಸಿ, ಸರ್ಕಾರವು ನಿಗದಿಪಡಿಸಿರುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಶೇಕಡ 60 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು ಆಯ್ಕೆಯಾದ ಮೂರು ತಿಂಗಳೊಳಗೆ ಪಾಸು ಮಾಡದಿದ್ದಲ್ಲಿ, ಅಂತಹ ಅಭ್ಯರ್ಥಿಯನ್ನು ನೇಮಕ ಮಾಡತಕ್ಕದ್ದಲ್ಲ. ಅಂತಹ ಪರೀಕ್ಷೆಯನ್ನು ಸರ್ಕಾರ ಅಥವಾ ಅದು ಅನುಮೋದಿಸಿದ ಏಜೆನ್ಸಿಯು ನಡೆಸತಕ್ಕದ್ದು"

ಸದರಿ ನಿಯಮಗಳನ್ವಯ 2012ರ ನಂತರ ಇಲಾಖೆಯಲ್ಲಿ ಅನುಕಂಪ ಆಧಾರದ ನೇಮಕಾತಿಗೊಂಡ ಅಭ್ಯರ್ಥಿಗಳು ಮತ್ತು ವೃತ್ತಿ ಆಧಾರಿತ ಕೋರ್ಸುಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಅರೆಕಾಲಿಕ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳಿಗೆ ನೇಮಕಾತಿಗೊಂಡು ಸ್ಥಳನಿಯುಕ್ತಿಗೊಳಿಸಿರುವ ಅಭ್ಯರ್ಥಿಗಳು ಸರ್ಕಾರವು ನಿಗದಿಪಡಿಸಿರುವ ಮೇಲಿನ ನಿಯಮದನ್ವಯ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಶೇಕಡಾ 60% ಅಂಕಗಳಿಗೆ ಕಡಿಮೆ ಇಲ್ಲದಂತೆ ನಿಗದಿತ ಅವಧಿಯೊಳಗೆ ಉತ್ತೀರ್ಣಗೊಳ್ಳತಕ್ಕದ್ದು. ಒಂದು ಪಕ್ಷ ನೇಮಕಾತಿ ಆದೇಶಗಳಲ್ಲಿ ವಿಧಿಸಿರುವ ಷರತ್ತುಗಳಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಶೇಕಡಾ 35% ತಿಳಿಸಿದ್ದಲ್ಲಿ ಅಂತಹ ಅಭ್ಯರ್ಥಿಗಳು ಸಹ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಶೇಕಡಾ 60% ಎಂದು ಓದಿಕೊಳ್ಳತಕ್ಕದ್ದು.

(ಸಹಿ)
**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**

*ಇವರಿಗೆ,*

*1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ.*

*2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪ್ರಾಂಶುಪಾಲರುಗಳಿಗೆ.*

*ಪ್ರತಿಯನ್ನು:*

*1) ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು- ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ತಿಳಿಸಲಾಗಿದೆ.*

*2) ಕಛೇರಿ ಪ್ರತಿ.*

G:\Govt_ KS_ NE PA_1\DCE _ 429.docx